ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 695/2017

ಸಿ.ಡಬ್ಲ್ಯೂ -2, ಪಿ.ಡಬ್ಲ್ಯೂ -1

ದಿಃ **08.10.2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ತಬು |
| ತಂದೆ/ಗಂಡನ ಹೆಸರು | ಮಹಮದ್ ಉಮರ್ |
| ವಯಸ್ಸು | 41 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಬಲ್ಲೇನಹಳ್ಳಿ ಗ್ರಾಮ |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದಃ**

2018 ವರ್ಷದಲ್ಲಿ ಬಲ್ಲೇನಹಳ್ಳಿ ಬಸ್ ನಿಲ್ದಾಣದ ಬಳಿ ಪೊಲೀಸರು ಒಂದು ದಾಖಲೆಗೆ ಸಹಿ ಪಡೆದಿರುತ್ತಾರೆ. ನನ್ನೊಂದಿಗೆ ಯಾರು ಸಹಿ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ಸದರಿ ದಾಖಲೆ ಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ಸುಮಾರು 12.00 ಗಂಟೆ ಮಧ್ಯಾಹ್ನದ ವೇಳೆಯಲ್ಲಿ ಮಾಡಿರುತ್ತೇನೆ. ದಿಃ20.03.2017 ರ ಸ್ಥಳ ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ನ್ನು ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**ಪಾಟೀಸವಾಲು ಮಾನ್ಯ ಎ.ಪಿ.ಪಿ.ಯವರಿಂದಃ**

ದಿಃ20.03.2017 ರಂದು ಬೆಳಿಗ್ಗೆ 7.30 ಗಂಟೆಯಿಂದ 8.30 ಗಂಟೆ ಸಮಯದಲ್ಲಿ ಚಾಸಾ-1 ರವರ ಜಮೀನಿನ ಸ.ನಂ.8 ರಲ್ಲಿ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಪೊಲೀಸರು ಸದರಿ

ದಿನದಂದು ಚಾಸಾ-1 ರವರ ಜಮೀನಿನಲ್ಲಿ ಬೆಳೆದಂತಹ ಅರಿಶಿಣದ ಕಳ್ಳತನದ ವಿಚಾರವಾಗಿ ಮಹಜರ್ ಕ್ರಮ ಜರುಗಿಸಿರುತ್ತಾರೆಂದರೇ ಸರಿಯಲ್ಲ. ನಿಪಿ-1 ಕ್ಕೆ ಚಾಸಾ-3 ರವರು ಸಹಿ ಮಾಡಿರುತ್ತಾರೆಂದರೆ ಸರಿಯಲ್ಲ. ನಿಪಿ-1 ರಲ್ಲಿ ಬರೆದಿರುವ ವಿಚಾರಗಳು ತಿಳಿದಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.